ಪಸಾರೆ ಜಿನಿಶಿಗಳ ವಿವರೆ.

1 ಜೇನು, 2 ಜೇನುಮೇಣ, 3 ಕಪಿಲಾರಂಗು, 4 ಗೇರುಪಪ್ಪು, 5 ಹುಣಸೇಹಣ್ಣು, 6 ಹೊಂಗೇಕಾಯಿ, 7 ಬ್ಯಾಲದಹಣ್ಣು 8 ಕಲ್ಲುಹುವ್ವು, 9 ಕೂಡುಹರಳು, 10 ಗೋಂದು, 11 ಮುರಡಿಪಪ್ಪು, 12 ಕೀಗೇಕಾಯಿ, 13 ತಾರೇಕಾಯಿ, 14 ಪಪ್ಪಿಚಕ್ಕೆ, 15 ಅಳಲೇಕಾಯಿ, 16 ಕೀತಾಫಲ, 17 ಜಾಲಿಗುತ್ತ, 18 ಹೊಂಗೇ ಎಲೆ, 19 ಕಲ್ಲುಹುವ್ವು.

2. ಚಡರಖಾಸ್ತುದಾರರು ಹರಾಜು ಖೈದಾದ ಕೂಡ್ಲೆ ಹರಾಜು ಮೊಬಲಗು ಪೈಕಿ ಕಾಲು ಹಿಸ್ಸೆಯನ್ನ ಠೇವಣಿ ಕಟ್ಟತಕ್ಕದ್ದು ಇದಕ್ಕೆ ತಪ್ಪಿದರೆ ಅವರನ್ನು ನಷ್ಟಕ್ಕೆ ಗುರಿ ಮಾಡಿಖಾಯು ದುಸರೇ ಹರಾಜು ಮಾಡಲ್ಪಡುವದು. ಆದರೆ ಅದರಿಂದ ವುಂಟಾಗುವ ಆದಾಯದಲ್ಲಿ ಸದರೀಯವರಿಗೆ ಏನೂ ದೊರಿಯಲಾರದು. ಹರಾಜು ಮಂಜೂರಾದ ಸಂಗತಿಯನ್ನ ಚಡಸವಾಲ್‌ದಾರ್‌ರಿಗೆ ತಿಳಿಸಿದ ಒಂದು ವಾರದೊಳಗಾಗಿ ಬಾಕಿ ಮುಕ್ಕಾಲು ಹಿಸ್ಸೆ ಮೊಬಲಗನ್ನ ಸದರೀಯವರು ಪಾವತಿ ಮಾಡತಕ್ಕದ್ದು. ಅಷ್ಟರಲ್ಲೇ ಹಣ ಪಾವತಿ ಮಾಡಲು ತಪ್ಪಿದರೆ ದರಖಾಸ್ತುದಾರ್ರು ಮೊದಲು ಪಾವತಿ ಮಾಡಿದ ಕಾಲು ಹಿಸ್ಸೆ ಠೇವಣಿ ಮೊಬಲಗು ಸರ್ಕಾರಕ್ಕೆ ದಂಡವಾಗಿ ಕೇರಿಸಿಕೊಳ್ಳಲ್ಪಡುವದಲ್ಲದೆ ಹರಾಜಿನಲ್ಲಿ ಪಡದ ಹಕ್ಕನ್ನ ತಪ್ಪುಸಲಾದೀತು. ಪೂರಾ ಮೊಬಲಗು ಪಾವತಿಯಾದ ನಂತರ ಹರಾಜು ಕಾಲದಲ್ಲಿ ಫಾಯಿಷಾಗುವ ಷರತ್ತುಗಳ ಕಂಡು ದರಖಾಸ್ತುದಾರರು ಕರಾರು ಬರದುಕೊಡಬೇಕಾಗಿಧೆ. ಇದಕ್ಕೆ ತಪ್ಪಿದರೆ ಜೆನಸಿಯನ್ನ ರೂಢಿಸಲು ಅಪ್ಪಣೆ ಕೊಡಲ್ಪಡಲಾರದು. ಪೂರಾ ಹರಾಜು ಮೊಬಲಗಿನ ಮೇಲೆ ರೂಪಾಯಿಗೆ ಒಂದು ಆಣೆಯಂತೆ ಲೋಕಲ್‌ಸೆಸ್ ಕೊಡತಕ್ಕದ್ದು.

3. ಹರಾಜು ಡೆಪ್ಯೂಟಿ ಕಮ್ಮಿಷನರವರ ಮಂಜೂರಾತಿಗೆ ವಳಪಟ್ಟಿರುತ್ತೆ.

4. ಇಜಾರೆದಾರನು ಹಿಡುವಳಿ ಜಮೀನಿನಲ್ಲಿರತಕ್ಕ ಮರಗಳ ಮತ್ತು ಸ್ವಂತ ಅಮರಾಯಿಗಳಲ್ಲಿ ದೊರೆಯುವ ಫಸಲನ್ನ ರೂಢಿಸಲು ಹಕ್ಕಿರುವದಿಲ್ಲ.

5. ಇನಾಂದಾರರ, ಸ್ಥಿರಪಟ್ಟಿ ಹಕ್ಕುದಾರಿಗೆ ಇಜಾರೆದಾರ್ರು ಪ್ರವೇಶಿಸಕೂಡದು.

6. ಗ್ರಾಮ ಅನುರಾಯಿ ಫಲ ಹುಟ್ಟುವಳಿಯು ಮೇಲ್ಕಂಡ ಇಜಾರೆಯಲ್ಲಿ ಅಡಗಿರುವದಿಲ್ಲ.

7. ದರಖಾಸ್ತುದಾರರು ತಕ್ಕ ಸವಾಲ್ ಮಾಡದೆ ಹೋದರೆ ಹರಾಜು ಮಾಡುವ ಆಫಿಸರರು ಹರಾಜು ನಿಲ್ಲಿಸುವದಕ್ಕೂ ಅಥವಾ ಮುಂದೆ ಮತ್ತೊಂದು ವೇಳೆ ಹರಾಜು ಮಾಡುವದಕ್ಕೂ ಸ್ವತಂತ್ರರಾಗಿರುತ್ತಾರೆ.

ಯಂ. ಎಸ್. ನಾರಾಯಣರಾವ್,
ಡೆಪ್ಯೂಟಿ ಕಮ್ಮಿಷನರ್.

ನೋಟಿಸ್.

ತಾರೀಖು 26ನೇ ಆಗಸ್ಟ್ 1896.

ಗೆಜೆಟ್ ಚಂದಾದಾರರು ಚಂದಾ ಹಣವನ್ನು ಪೋಸ್ಟ್‌ಆಫಿಸ್ ಮನಿಆರ್ಡರ್ ಮೂಲಕ ಕಳುಹಿಸುತ್ತಾ ಅವರ ಹೆಸರು ಸರಿಯಾದ ವಿಳಾಸ ಮುಂತಾದ ತಫ್ಸೀಲ್ ತಿಳಿಸದೇಲೂ ಮತ್ತು ರಿಕಾರ್ಡಿನಲ್ಲಿ ಯಿಡುವದಕ್ಕೆ ವಿಶೇಷ ಅನನುಕೂಲವಾಗಿರುವಂಥಾ ಕೂರ್ಪಗಳ ಮೇಲೆ ಅಸ್ಪಷ್ಟವಾಗಿ ಬರಿಯುವದರಿಂದಲೂ ವಿಶೇಷ ಗಲಾಟೆಗೆ ಆಸ್ಪದವಾಗಿರುವದರಿಂದ ಸರ್ವರಿಗೂ ತಿಳಿಸುವದೇನಂದರೆ,—ಯಲ್ಲಾ ತ್ಞ ಲ್ಲೂಕು ಖಜಾನೆಗಳಲ್ಲಿಯೂ ಗೆಜೆಟ್ ಚಂದಾ ಮೊಬಲಗು ತೆಗದುಕೊಂಡು ರೀತಿ ಕೊಡುವ ಬಗ್ಯಾಗಿ ಅಪ್ಪಣೆ ಯಿರುವದ್ದರಿಂದ ಇನ್ನು ಮೇಲೆ ಮೈಸೂರ್ ಠೇವೆ ಅಲ್ಲದ ಇತರ ಸ್ಥಳಗಳಿಂದ ಬರುವ ಮನಿಆರ್ಡರ್ ಹೊರ್ತಾಗಿ ಅನ್ಯಥಾ ಆ ಬಗ್ಯಾಗಿ ಈ ಆಫಿಸಿಗೆ ಕಳುಹಿಸಲ್ಪಡುವ ಯಾವ ಮನಿಆರ್ಡರುಗಲಿ ಈ ಆಫಿಸಿನಲ್ಲಿ ಅಂಗೀಕರಿಸಲ್ಪಡಲಾರದು ಮತ್ತು ಪೋಸ್ಟ್ ಕಾರ್ಡ್ ಮೂಲಕ ಅಥವಾ ನೋಟ್ ಪೇಪರಿಗಿಂತಲೂ ಕಮ್ಮಿಯಾದ ಕಾಗದ್ದಲ್ಲಿ ಬರಿಯಲ್ಪಡುವ ಯಾವ ಅಂಕಕ್ಕೂ ನಿಗೆ ಕೊಡಲ್ಪಡಲಾರದು.

ಮೈಸೂರ ಗೆಜೆಟ್ ಚಂದಾ ದರ ವಗ್ಯೆರೆ.

ತಾರೀಖು 26ನೇ ಜನವರಿ 1889.

ಮೈಸೂರ ಗೆಜೆಟ್ ಬೆಂಗಳೂರಲ್ಲಿ ಛಾಪಿಸಲ್ಪಡುತ್ತೆ, ಮತ್ತು ಸದರೀ ಗೆಜೆಟಿನಲ್ಲಿ ಛಾಪಿಸಲು ಉದ್ದೇಶಿಸಲ್ಪಟ್ಟ ತಮಾಂ ನೋಟಿಸ್ ಮುಂತಾದವುಗಳೂ ಬೆಂಗಳೂರಲ್ಲಿರುವ ಮೈಸೂರ ಗೆಜೆಟ್ ಕಂಪೈಲರವರ ಹೆಸರಿಗೆ ವಿಳಾಸ ಬರೆಯಲ್ಪಟ್ಟು ರವಾನಿಸಲ್ಪಡತಕ್ಕದ್ದು.

	ಚಂದಾ. ರೂ. ಆ.	ಟಪ್ಪಾಲ್ ಹಾಸಲು ಮೈಸೂರು ಠೇವೆ ಶಿವಾಯಿ ಇತರ ಸ್ಥಳಗಳಿಗೆ. ರೂ. ಆ.
ಇಂಗ್ಲೀಷು ಅಥವಾ ಕನ್ನಡ ಕಾಪಿ 1ಕ್ಕೆ 12 ತಿಂಗಳಿಗೆ	3 8	1 12
ಇಂಗ್ಲೀಷು ಮತ್ತು ಕನ್ನಡ ಸುದಾ 12 ತಿಂಗಳಿಗೆ	7 0	3 8
ಚಕ್ಷ್ ಮಾಹೇ ಯಾ ಕ್ವಾರ್ಟರಿಗೆ		ದಾಮಾಷಾಯಿ ಪ್ರಕಾರ ದರಗಳು
ಚಾಲ್ತಿ ವರುಷದ ಗೆಜೆಟ್ ಕಾಪಿ 1ಕ್ಕೆ ರೆಗ್ಯುಲೇರ್ಸ್ ಯಾ ಆಕ್ಟ್ಯುಗಳು ಯಾವದೂ ಇಲ್ಲದಿದ್ದರೆ.		0 8

ಹಿಂದಿನ ವರುಷದ ಗೆಜೆಟ್ ಕಾಪಿಗಳಿಗೆ ಚಾರ್ಜ್ ಕೇಳಿ ತಿಳಿದುಕೊಳ್ಳಬಹುದು.

1891ನೇ ಇಸವಿ ಜುಲೈ 2ನೇ ಮತ್ತುಂ 155ನೇ ನಂಬರ್ ಉಳ್ಳ ಗವರ್ನಮೆಂಟ್ ಇಸ್ತಿಹಾರ್‌ನಾಮೆ ಅನುಸರಿಸಿ ಕನ್ನಡ ಗೆಜೆಟ್ ಮೈಸೂರು ಠೇವೆಯಲ್ಲಿನ ಪಟೇಲ್ ಶಾನುಭೋಗರುಗಳಿಗೆ ಅರ್ಧ ದರಕ್ಕೆ ಕೊಡಲ್ಪಡುವದು; ಆದರೆ ಅಂಥಾ ಪಟೇಲ್, ಶಾನುಭೋಗರುಗಳು ಆ ಕಾಲದಲ್ಲಿ ವಾಸ್ತವ್ಯವಾಗಿ ಪಟೇಲಿ ಯಾ ಶಾನುಭಾವಿಕೆ ಕೆಲಸ ನೋಡುತಲಿಧಾರೆಂಬದಾಗಿ ಆಯಾ ತಾಲ್ಲೂಕು ಅಮಲ್‌ದಾರರಿಂದ ವಂದು ಸರಟಿಫಿಕೇಟನ್ನ ಪಡೆದು ಹಾಜರ್ಮಾಡಬೇಕಾಗಿರುತ್ತೆ.

1895ನೇ ಇಸವಿ ಜೂನ್ 21ನೇ ಮುಕ್ತಂ 24205—6—ಜಿ. 6200ನೇ ನಂಬರ್ ಗವರ್ನಮೆಂಟ್ ಆರ್ಡರ್ ಅನುಸರಿಸಿ ಮೇಲ್ಕಂಡ ರಿಯಾಯತಿ ದರವು, ನಾಡ ಪಟೇಲರಿಗೂ ಲಗಾವ್ ಮಾಡಲ್ಪಟ್ಟಿರುತ್ತೆ.

ಸಿವಿಲ್ ಕೋರ್ಟ್‌ನಿಂದ ಕೊಡಲ್ಪಡುವ 1860ನೇ ಇಸವಿ XXVIIನೇ ಆಕ್ಟ್ ಅನುಸರಿಸಿ ಸರ್ಟಿಫಿಕೇಟಿ ಬಗ್ಗೆ ನೋಟಿಸ್‌ಗಳು:—

ಮೊದಲನೇ ದಫಾ ಘಾಯಿಷ್ ಮಾಡತಕ್ಕ ಬಗ್ಗೆ ಇಂಗ್ಲೀಷು ಅಥವಾ ಕನ್ನಡ ..	2	8
ಎರಡನೇ ಸಲ ವ ಆ ತರುವಾಯ ಪ್ರತಿ ಆವರ್ತಿಗೂ ಡಿಟೋ	1	4

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 347ನೇ ಸೆಕ್ಷನ್ ಅನುಸರಿಸಿ ದಿವಾಳೀ ಅಪ್ಲಿಕೇಷನ್‌ಗಳ ಬಗ್ಗೆ ನೋಟಿಸ್‌ಗಳಿಗೆ :—

ಮೊದಲನೇ ಸಲಕ್ಕೆ	5	0
ಎರಡನೇ ವ ಆ ತರುವಾಯ ಪ್ರತಿ ದಫಾಕ್ಕೆ	2	8

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 354ನೇ ಸೆಕ್ಷನ್ ಅನುಸರಿಸಿ ಸಿವಿಲ್ ಕೋರ್ಟ್‌ಗಳಿಂದ ಕೊಡಲ್ಪಡುವ ದಿವಾಳೀ ಹುಕುಂಗಳು ಬಗರ್ ಚಾರ್ಜ್ ಪ್ರಕಟಿಸಲ್ಪಡುತವೆ.

ಡ್ಯೂಪ್ಲಿಕೇಟ್ ಕಾಫೀ ಪಬ್ಲ್ಯೆ ವಗೈರೇ ಕೊಡುವ ಬಗ್ಗೆ ರೆವಿನ್ಯೂ ಆಫಿಸರ್‌ಗಳು ಕೊಡುವ ನೋಟಿಸ್‌ಗಳಿಗೆ :—

ಮೊದಲನೇ ಸಲಕ್ಕೆ	ಪುಟ 1ಕ್ಕೆ ..	10	0
ಎರಡನೇ ಸಲ ವ ಆ ತರುವಾಯ ಪ್ರತಿ ಸಲಕ್ಕೂ	,, ..	5	0

ಖಾಸಗೀ ಪ್ರಕಟನೆಗಳಿಗೆ ಈ ಕೆಳಗೆ ಕಾಣಿಸಲ್ಪಡುವ ದರಗಳಪ್ರಕಾರ ಚಾರ್ಜ್ ಮಾಡಲ್ಪಡುತ್ತೆ:—

ಮೊದಲನೇ ದಫಾ ಇಂಗ್ಲೀಷ್ ಅಥವಾ ಕನ್ನಡಕ್ಕೆ	ಪಬ್ಲಿ 1ಕ್ಕೆ ..	0	8
ಎರಡನೇ ದಫಾ ಡಿಟೋ	ಡಿಟೋ ..	0	6
ಮೂರನೇ ವ ಆ ತರುವಾಯ ಪ್ರತಿ ಸಲಕ್ಕೆ		0	4

ಸೂಚನೆ.—ಚಂದಾ ವಗೈರೇ ಬಗ್ಗೆ ಪೋಸ್ಟೇಜ್ ಲೇಬಿಲ್ಲು ಕಳುಹಿಸಲ್ಪಟ್ಟ್ಯಾಗ ರೂಪಾಯಿಗೆ ಪಂದಾಜೆ ಯಂತೆ ಜಾಸ್ತೀ ಲೇಬಿಲ್ಲು ಕಳುಹಿಸಲ್ಪಡತಕ್ಕದ್ದು.

ಗವರ್ನಮೆಂಟ್ ಆರ್ಡರ್ ಪ್ರಕಾರ ತವಾಂ ಚಂದಾ ವೊಬಲಗುಗಳೂ, ಪ್ರಕಟನೇ ಚಾರ್ಜುಗಳೂ ಮುಂಗಡವಾಗಿ ಪಾವತಿ ಮಾಡಲ್ಪಡಬೇಕು.

ಸರ್ಕಾರಿಯಾಗಿ ಗೆಜೆಟ್ ಪಡೆಯುವ ಬಗ್ಯಾದ ದರಖಾಸ್ತುಗಳು ಮೈಸೂರ ಗವರ್ನ್‌ಮೆಂಟ್ ಜನರಲ್ ಮತ್ತು ರೆವಿನ್ಯೂ ಇಲಾಖೆ ಸೆಕ್ರಟೆರಿಯವರಿಗೆ ಕಳುಹಿಸಲ್ಪಡತಕ್ಕದ್ದು.

ಗೆಜೆಟ್ ತಲಪಲಿಲ್ಲವೆಂಬ ಫಿರ್ಯಾದ್‌ಗಳು ಇದರಡಿ ರುಜೂ ಮಾಡಿರುವವರಿಗೆ ಅದು ತಲಪಬೇಕಾದ ತಾರೀಖು ಲಾಗಾಯತು ಒಂದು ವಾರದ ಪ್ರೊಳಗಾಗಿ ತಿಳಿಸಲ್ಪಡಬೇಕು.

ಮೈಸೂರ ಗೆಜೆಟ್‌ನಲ್ಲಿ ಛಾಪಿಸಲು ಉದ್ದೇಶಿಸಲ್ಪಟ್ಟ ತವಾಂ ನೋಟಿಸ್‌ವ ಇಸ್ತಿಹಾರ್‌ನಾಮೆಗಳೂ ಆ ಗೆಜೆಟ್ ಛಾಪಿಸಲ್ಪಡುವ ಹಿಂದಿನ ಮಂಗಳವಾರದ ದಿವಸ ಮಧ್ಯಾನ್ನ 12 ಘಂಟೆ ವಳಗಾಗಿ ಕಂಪ್ಯೆಲರ್ ಆಫಿಸಿಗೆ ತಲಪಬೇಕಾಗಿರುತ್ತೆ, ಆ ತರುವಾಯ ಕಳುಹಿಸಲ್ಪಡುವ ಯಾ ತಲಪುವ ಕಾಗದಗಳು, ಕೆಲಸ ನಿರ್ವಾಹಕ್ಕೆ ಅನುಕೂಲವಾಗಿದ್ದರೇನೇ ಹೊರ್ತು ಅನ್ಯಥಾ ಅದೇ ವಾರದ ಗೆಜೆಟ್ಟಿನಲ್ಲಿ ಛಾಪಿಲ್ಪಡುತ್ತೆಂಬ ಖಾತರ್ ಯಿಲ್ಲ.

ಸಿ. ರಾಘವಾಚಾರ್ಲು,
ಮೈಸೂರ್ ಗೆಜೆಟ್ ಕಂಪ್ಯೆಲರ್.

Mysore Govt. Central Press, Bangalore.—1896.